ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಘನತ್ಯಾಜ್ಯ ನಿರ್ವಹಣೆ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

180 (292) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಘನತ್ಯಾಜ್ಯ ನಿರ್ವಹಣೆ ಇತ್ತೀಚೆಗೆ ಒಂದು ದೊಡ್ಡ ಸಮಸ್ಯೆಯಾಗಿದ್ದು, ಅದರ ನಿರ್ವಹಣೆಗೆ ಸೂಕ್ತ ಫಲಿತಾಂಶಗಳು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದ ಎಷ್ಟು ಭಾಗಗಳಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿದೆ; ಅವುಗಳೆಲ್ಲವೂ ಹಾಲಿ ಕಾರ್ಯನಿರ್ವಹಿಸುವ ಸ್ಥಿತಿಯಲ್ಲಿವೆಯೇ;

(ಇ) ಉಳಿದ ನಗರ ಕೇಂದ್ರಗಳಲ್ಲಿ ಯಾವ ಕಾಲಮಿತಿಯಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಹಾಗೂ ನಿರ್ವಹಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು;

(ಈ) ಈ ಯೋಜನೆಯ ರೂಪುರೇಷೆಗಳ ಬಗ್ಗೆ ವಿವರವಾದ ಮಾಹಿತಿ ನೀಡುವುದು; ಸದರಿ ಯೋಜನೆಯ ಅನುಷ್ಠಾನಕ್ಕೆ ಸರ್ಕಾರದಿಂದ ಎಷ್ಟು ಹಣವನ್ನು ಮೀಸಲಿಡಲಾಗಿದೆ?